ಕರ್ನಾಟಕ ವಿಧಾನಸಭೆ

ಮಂಗಳವಾರ, ದಿನಾಂಕ: 11ನೇ ಜನವರಿ, 2011ರಂದು

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 11 ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರಾದ ಶ್ರೀ ಕೆ.ಜಿ. ಬೋಪಯ್ಯರವರು

ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು.

1. ಸಂಪಾಪ ಸೂಚನೆ

ವಿಷಯ : ಶ್ರೀ ಜೆ.ಎ. ಫರ್ನಾಂಡೀಸ್‌ರವರ ನಿಧನದ ಬಗ್ಗೆ.

ಮಾನ್ಯ ಸಭಾಧ್ಯಕ್ಷರು : ವಿಧಾನ ಸಭೆಯ ಮತ್ತು ಸಂಸತ್ತಿನ ಮಾಜಿ ಸದಸ್ಯರಾದ ಶ್ರೀ ಜೆ.ಎ. ಫರ್ನಾಂಡಿಸ್ ಅವರು ದಿನಾಂಕ: 13.11.2010ರಂದು ಅನಾರೋಗ್ಯದಿಂದ ನಿಧನ ಹೊಂದಿರುತ್ತಾರೆಂದು ಸದನಕ್ಕೆ ತಿಳಿಸಲು ವಿಷಾದಿಸುತ್ತೇನೆ.

ದಿವಂಗತರು 21-06-1927ರಲ್ಲಿ ಜನಿಸಿದ್ದು, ಡನ್‌ಲಪ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಯಲ್ಲಿ ಸುಮಾರು 30 ವರ್ಷ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿರುವ ಶ್ರೀಯುತರು ಬೆಂಗಳೂರು ವಿವಿಧೋದ್ದೇಶ ಸಾಮಾಜಿಕ ಸೇವಾ ಸಂಘದ ಉಪಾಧ್ಯಕ್ಷರಾಗಿಯೂ ಸೇವೆ ಸಲ್ಲಿಸಿರುತ್ತಾರೆ. ದಿವಂಗತರು ಏಳು ಮತ್ತು ಎಂಟನೇ ವಿಧಾನಸಭೆಯಲ್ಲಿ ಆಂಗ್ಲೋ ಇಂಡಿಯನ್ ಪ್ರತಿನಿಧಿಯಾಗಿ ನಾಮನಿರ್ದೇಶನಗೊಂಡು ಸೇವೆ ಸಲ್ಲಿಸಿರುತ್ತಾರೆ. ಅಲ್ಲದೇ 10ನೇ ವಿಧಾನಸಭೆಗೂ ಸಹ ಪುನರ್ ನಾಮಕರಣಗೊಂಡಿರುತ್ತಾರೆ. 1990ರಲ್ಲಿ ಲೋಕಸಭೆಗೆ ಆಂಗ್ಲೋ ಇಂಡಿಯನ್ ಪ್ರತಿನಿಧಿಯಾಗಿ ನಾಮನಿರ್ದೇಶನಗೊಂಡು ಆಂಗ್ಲೋ ಇಂಡಿಯನ್ ವಿದ್ಯಾರ್ಥಿಗಳ ಹಿತಕ್ಕಾಗಿ ಶ್ರಮಿಸಿರುತ್ತಾರೆ.

ಮೃತರ ಗೌರವಾರ್ಥ ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ತಮ್ಮಲ್ಲಿ ಕೋರುತ್ತೇನೆ.

(ಮೃತರ ಗೌರವಾರ್ಥ ಸಭೆಯು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಿತು)